## ವಿಧಾನ ಪರಿಷತ್ ಸದಸ್ಯರಾದ ಶ್ರೀ ಡಿ.ಎಸ್.ಅರುಣ್ ರವರು ನಿಯಮ 72ರ ಅಡಿಯಲ್ಲಿ ಮಂಡಿಸಿರುವ ಸೂಚನೆಗೆ ಸರ್ಕಾರದ ಉತ್ತರ

**ಪ್ರಶ್ನೆ** ರಾಜ್ಯದಲ್ಲಿ ಮುಸ್ಲಿಂ ಅಲ್ಲದ ಸಮುದಾಯಗಳಿಗೆ ಸೇರಿದ ಹೆಣ್ಣುಮಕ್ಕಳನ್ನು ಗುರಿಯಾಗಿಸಿಕೊಂಡು ಲವ್ ಜಿಹಾದ್ ಮೂಲಕ ಧಾರ್ಮಿಕ ಮತಾಂತರಗೊಳಿಸುತ್ತಿರುವುದನ್ನು ಹಾಗೂ ಇದನ್ನು ನಿಯಂತ್ರಣ ಮಾಡುವ ಕುರಿತು

******

**ಉತ್ತರ:** ರಾಜ್ಯದಲ್ಲಿ ಮತಾಂತರ ನಿಷೇಧ ಕಾಯ್ದೆ ಜಾರಿ ಕುರಿತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯದ ಅಧಿಸೂಚನೆ ಸಂಖ್ಯೆ: ಸಂ.ವ್ಯಶಾ.ಇ 55 ಶಾಸನ 2021, ಬೆಂಗಳೂರು ದಿನಾಂಕ: 17.05.2022ರ ಅಧಿಸೂಚನೆ ರೀತ್ಯಾ ರಾಜ್ಯದಲ್ಲಿ ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ಹಕ್ಕು ಸಂರಕ್ಷಣಾ ಅಧ್ಯಾದೇಶ-2022ರ ಕಾಯ್ದೆಯು ದಿನಾಂಕ: 17.05.2022 ರಿಂದ ಜಾರಿಗೆ ಬಂದಿರುತ್ತದೆ.

ಸರ್ಕಾರದ ಪತ್ರ ಸಂಖ್ಯೆ ಹೆಚ್‌ಡಿ 460 ಎಸ್‌ಎಸ್‌ಟಿ 2021 (ಭಾಗ-2) ದಿನಾಂಕ: 25.05.2022ರ ಪತ್ರದಲ್ಲಿ ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ಹಕ್ಕು ಸಂರಕ್ಷಣಾ ಅಧ್ಯಾದೇಶ-2022ರ ಉದ್ದೇಶ ಮತ್ತು ನಿಯಮಗಳ ಬಗ್ಗೆ ಹೆಚ್ಚಿನ ಅರಿವು ಮೂಡಿಸಿ, ರಾಜ್ಯದಲ್ಲಿ ಈ ಅಧ್ಯಾದೇಶವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಘಟಕಾಧಿಕಾರಿಗಳಿಗೆ ಸೂಚಿಸಿದೆ.

ರಾಜ್ಯದಲ್ಲಿ ಮತಾಂತರ ನಿಷೇಧ ಕಾಯ್ದೆ ಜಾರಿಗೆ ಬಂದ ನಂತರ ಇಲ್ಲಿಯವರೆಗೆ ಈ ಕೆಳಗಿನಂತೆ ಪ್ರಕರಣಗಳು ದಾಖಲಾಗಿರುತ್ತವೆ.

| ಕ್ರಸ | ಘಟಕ | ಮತಾಂತರ ನಿಷೇಧ ಕಾಯ್ದೆಯಡಿ ದಾಖಲಾದ ಪ್ರಕರಣಗಳ ಸಂಖ್ಯೆ |
|---|---|---|
| 1 | ಬೆಂಗಳೂರು ನಗರ | 2 |
| 2 | ಮಂಗಳೂರು ನಗರ | 2 |
| 3 | ಕೊಡಗು ಜಿಲ್ಲೆ | 2 |
| 4 | ಮಂಡ್ಯ | 2 |
| 5 | ಚಿತ್ರದುರ್ಗ | 1 |
| | ಒಟ್ಟು | **9** |

ಲವ್ ಜಿಹಾದ್ ಮೂಲಕ ಧಾರ್ಮಿಕ ಮತಾಂತರಗೊಳಿಸುತ್ತಿರುವುದನ್ನು ನಿಯಂತ್ರಿಸಲು ಈ ಕುರಿತು ಈ ಕೆಳಗಿನಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ.

- ಠಾಣಾ ವ್ಯಾಪ್ತಿಯಲ್ಲಿ ಶಾಂತಿ ಸಭೆ, ಯುವಜನ ಸಭೆ, ಮೊಹಲ್ಲ ಮಿಟಿಂಗ್, ನಾಗರೀಕ ಸಮಿತಿ ಸಭೆಗಳನ್ನು ನಡೆಸಿ ಸಾರ್ವಜನಿಕರಿಗೆ ಮತ್ತು ಯುವಕರಿಗೆ ತಿಳುವಳಿಕೆಗಳನ್ನು ನೀಡಲಾಗುತ್ತಿದೆ ಹಾಗೂ ವೃತ್ತ ಉಪ ವಿಭಾಗ, ಜಿಲ್ಲಾ ಮಟ್ಟದಲ್ಲಿಯೂ ಸಹ ಸಭೆಗಳನ್ನು ಕೈಗೊಳ್ಳಲಾಗುತ್ತಿದೆ.

- ಪ್ರತಿ ಠಾಣಾ ವ್ಯಾಪ್ತಿಯಲ್ಲಿ ಗಸ್ತು 112 ಹೊಯ್ಸಳ ವಾಹನದಲ್ಲಿ ದಿನದ 24 ಗಂಟೆಯೂ ಅಧಿಕಾರಿ, ಸಿಬ್ಬಂದಿಯವರು ರೌಂಡ್ಸ್ ಗಸ್ತು ಕರ್ತವ್ಯದಲ್ಲಿ ನಿರತರಾಗಿದ್ದಾರೆ.

- ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವ ವ್ಯಕ್ತಿಗಳು/ ಸಂಘಟನೆಗಳು/ಸಾಮಾಜಿಕ ಜಾಲತಾಣಗಳ ಬಗ್ಗೆ ಸತತ ನಿಗಾ ಇಡಲಾಗಿದೆ.
- ಠಾಣಾ ವ್ಯಾಪ್ತಿಯಲ್ಲಿ ರಾತ್ರಿ ಬೀಟ್ ಮತ್ತು ಶುಭೋದಯ (ಗುಡ್ ಮಾರ್ನಿಂಗ್) ಬೀಟುಗಳನ್ನು ಕೈಗೊಳ್ಳಲಾಗಿದೆ. ಏಕ ಕಾಲದಲ್ಲಿ ಜಿಲ್ಲಾ ವ್ಯಾಪ್ತಿಯಲ್ಲಿ ಕ್ಷಿಪ್ರ ವಾಹನ ತಪಾಸಣೆಗಳನ್ನು ಕೈಗೊಳ್ಳಲಾಗಿದೆ.
- ಮತೀಯ ಗೂಂಡಾಗಳು ಕಂಡುಬಂದ್ದಲ್ಲಿ ಆರೋಪಿಗಳನ್ನು ಗುರುತಿಸಿ ರೌಡಿ ಪಟ್ಟಿಯನ್ನು ದಾಖಲಿಸಿ, ಸದರಿಯವರನ್ನು ಗಡಿಪಾರು ಮಾಡಲಾಗಿರುತ್ತದೆ.
- ಹಬ್ಬ-ಹರಿ ದಿನಗಳಲ್ಲಿ ಎಲ್ಲಾ ಕೋಮಿನ ಮುಖಂಡರನ್ನು ಸೇರಿಸಿ ಶಾಂತಿ ಸಭೆ, ಮೋಹಲ್ಲಾ ಮೀಟಿಂಗ್, ಯುವಕರ ಸಭೆ ಹಾಗೂ ಸಾರ್ವಜನಿಕರಿಗೆ ಕಾನೂನಿನ ಅರಿವು ಮೂಡಿಸುವುದು.
- ಎಲ್ಲಾ ಸಮಾಜದ ಮುಖಂಡರಿಗೆ/ ಯುವಕರಿಗೆ ಹಬ್ಬ ಹರಿದಿನಗಳಲ್ಲಿ ಕರೆಯಿಸಿ ಶಾಂತಿ ಸಭೆಗಳನ್ನು ಕೈಕೊಂಡು ಸೂಕ್ತ ತಿಳುವಳಿಕೆ ನೀಡುತ್ತಾ ಬರಲಾಗುತ್ತಿದೆ.
- ಮೇಲ್ಕಂಡ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಯಾವುದೇ ಧಾರ್ಮಿಕ ಮತಾಂತರದ ಬಗ್ಗೆ ಮಾಹಿತಿ ಕಂಡು ಬಂದಲ್ಲಿ ತಕ್ಷಣ ಪ್ರಕರಣ ದಾಖಲಿಸಿ ಹಿರಿಯ ಪೊಲೀಸ್ ಅಧಿಕಾರಿರವರು ಸ್ಥಳಕ್ಕೆ ಭೇಟಿ ನೀಡಿ ಅಪರಾಧಿಯನ್ನು ದಸ್ತಗಿರಿ ಮಾಡಿ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು.
- ಇಂತಹ ಪ್ರಕರಣಗಳು ಕಂಡುಬಂದಲ್ಲಿ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಲಾಗುವುದು.

**ಸಂಖ್ಯೆ : ಒಇ 707 ಎಸ್ ಎಸ್ ಟಿ 2022**

(ಆರಗ ಜ್ಞಾನೇಂದ್ರ)
ಗೃಹ ಸಚಿವರು

136

C 136